ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/55/ಶೀಲಿ/ಬಡ್ತಿ/ಬಸ್ಥಾವಿ/2018-19 ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:26 .07.2018

## ಸುತ್ತೋಲೆ

**ವಿಷಯ :** ಕಾಲೇಜು ಶಿಕ್ಷಣ ಇಲಾಖೆಯ ಹಿರಿಯ ಬೆರಳಚ್ಚುಗಾರರು/ಬೆರಳಚ್ಚುಗಾರರಿಗೆ ಶೀಘ್ರಲಿಪಿಗಾರರ ಹುದ್ದೆಗೆ ಬಡ್ತಿ ನೀಡುವ ಸಂಬಂಧದಲ್ಲಿ ಮಾಹಿತಿ ಒದಗಿಸುವ ಬಗ್ಗೆ.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹ ಹಿರಿಯ ಬೆರಳಚ್ಚುಗಾರರು/ 05 ವರ್ಷಗಳ ಸೇವೆಯನ್ನು ಪೂರೈಸಿರುವಂತಹ ಬೆರಳಚ್ಚುಗಾರರಿಂದ ಬಡ್ತಿ ಮೂಲಕ ಶೀಘ್ರಲಿಪಿಗಾರರ ಹುದ್ದೆಯನ್ನು ತುಂಬಲು ಕ್ರಮ ಕೈಗೊಳ್ಳಬೇಕಾಗಿದ್ದು, ಈ ಸಂಬಂಧದಲ್ಲಿ ತಮ್ಮ ಕಛೇರಿ / ಕಾಲೇಜುಗಳಲ್ಲಿ ಸೇವೆಯಲ್ಲಿರುವ ಹಿರಿಯ ಬೆರಳಚ್ಚುಗಾರರು/05 ವರ್ಷಗಳ ಸೇವೆಯನ್ನು ಪೂರೈಸಿರುವ ಬೆರಳಚ್ಚುಗಾರರು ಕನ್ನಡ ಹಿರಿಯ ಶೀಘ್ರಲಿಪಿಯಲ್ಲಿ ಉತ್ತೀರ್ಣರಾಗಿದ್ದಲ್ಲಿ ಅವರ ಮಾಹಿತಿಗಳನ್ನು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ನಿಗದಿತ ನಮೂನೆಯಲ್ಲಿ ದಾಖಲಿಸಿ, ಅಗತ್ಯ ದೃಢೀಕೃತ ದಾಖಲಾತಿಗಳೊಂದಿಗೆ ಪ್ರಸ್ತಾವನೆಯನ್ನು ಕೂಡಲೇ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ. ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು 2012ರನ್ವಯ ನೌಕರರು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗುವುದು ಕಡ್ಡಾಯವಾಗಿರುತ್ತದೆ. ಆದುದರಿಂದ ಈ ಬಗ್ಗೆಯೂ ಮಾಹಿತಿ ನೀಡುವಂತೆ ಹಾಗೂ ಸದರಿ ನೌಕರರ ವಿರುದ್ಧ ಇಲಾಖಾ ವಿಚಾರಣೆ/ಶಿಸ್ತುಕ್ರಮ ಜಾರಿಯಲ್ಲಿದೆಯೇ ಅಥವಾ ಇಲ್ಲವೇ ಎಂಬ ಬಗ್ಗೆಯೂ ಸಹ ವರದಿ ನೀಡುವಂತೆ ತಿಳಿಸಲಾಗಿದೆ.

ತಮ್ಮ ವಿಶ್ವಾಸಿ,

Shilpa

ಕಾಲೇಜು ಶಿಕ್ಷಣ ಮುಖ್ಯ ಆಡಳತಾಧಿಕಾರಿಗಳು

ಇವರಿಗೆ :

ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು / ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರುಗಳಿಗೆ – ಅಗತ್ಯ ತುರ್ತು ಕ್ರಮಕ್ಕಾಗಿ.

ಪ್ರತಿಯನ್ನು :

1. ಮಾಹಿತಿ ಅಧಿಕಾರಿಗಳು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಮೇಲ್ಕಂಡ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.
2. ಕಛೇರಿ ಪ್ರತಿ.

*DCE-55-STENO-PROMOTION-2018-19.docx*

# ನಮೂನೆ

| ಕ್ರ. ಸಂ. | ಹಿರಿಯ ಬೆರಳಚ್ಚುಗಾರರ/ಬೆರಳಚ್ಚುಗಾರರ ಮೂಲ ವೃಂದದ /ಹೈ.ಕ. ಸ್ಥಳೀಯ ವೃಂದದ ಜೇಷ್ಠತಾ ಪಟ್ಟಿಯ ಕ್ರ.ಸಂ. | ಹೆಸರು ಶ್ರೀ/ಶ್ರೀಮತಿ | ಜನ್ಮ ದಿನಾಂಕ | ಸೇವಾ ಪೂರ್ವ ಅವಧಿ ಘೋಷಣೆಯಾದ ದಿನಾಂಕ, ಆದೇಶ ಸಂಖ್ಯೆ ಮತ್ತು ದಿನಾಂಕ (ಆದೇಶದ ಪ್ರತಿ ಲಗತ್ತಿಸುವುದು) | ಅಕೌಂಟ್ಸ್ ಹೈಯರ್ ಇಲಾಖಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ದಿನಾಂಕ (ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು | ಕನ್ನಡ ಹಿರಿಯ ಶೀಘ್ರಲಿಪಿಯಲ್ಲಿ ಉತ್ತೀರ್ಣರಾದ ದಿನಾಂಕ (ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು) | ಹಿರಿಯ ಬೆರಳಚ್ಚುಗಾರರ ಹುದ್ದೆಗೆ ಬಡ್ತಿ ಹೊಂದಿದ್ದಲ್ಲಿ ಬಡ್ತಿ ಹೊಂದಿರುವ ದಿನಾಂಕ, (ಆದೇಶ ಸಂಖ್ಯೆ ಮತ್ತು ದಿನಾಂಕ) | ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ದಿನಾಂಕ(ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು) |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| | | | | | | | | |
| | | | | | | | | |

ಜಂಟಿ ನಿರ್ದೇಶಕರು/ಪ್ರಾಂಶುಪಾಲರ ಸಹಿ
ಮೊಹರಿನೊಂದಿಗೆ